**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ರವರ ನ್ಯಾಯಾಲಯ, ನಂಜನಗೂಡು**

**ಸಿಸಿ ಸಂಖ್ಯೆ: 8830/2022**

**ಫಿರ್ಯಾದುದಾರರು** : ಸರ್ಕಾರದ ಪರವಾಗಿ ಆರಕ್ಷಕ ಉಪ-ನಿರೀಕ್ಷಕರು,
ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆ,
ನಂಜನಗೂಡು.

ವಿರುದ್ಧ

**ಆರೋಪಿಗಳು** : ಶ್ರೀ.ರಾಜಯ್ಯ ಮತ್ತು ಇನ್ನೊಬ್ಬರು

:: **ದೋಷಾರೋಪಣೆ** ::

**ಶ್ರೀ ಸತೀಶ ಕೆ.ಜಿ., ಬಿ.ಎ., ಎಲ್.ಎಲ್.ಬಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ನಂಜನಗೂಡು ಆದ ನಾನು ಆರೋಪಿಗಳಾದ-

1) ಶ್ರೀ.ರಾಜಯ್ಯ ಬಿನ್ ಲೇಟ್ ಮಾರಯ್ಯ
ವಯಸ್ಸು ಸುಮಾರು 59 ವರ್ಷ,

2) ಶ್ರೀಮತಿ.ರಾಜಮ್ಮ ಕೋಂ ರಾಜಯ್ಯ
ವಯಸ್ಸು ಸುಮಾರು 50 ವರ್ಷ,

ನಂಜನಗೂಡು ತಾಲ್ಲೂಕಿನ ಹುಸ್ಕೂರು ಗ್ರಾಮದ ನಿವಾಸಿಗಳಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ-

ಮೊದಲನೆಯದಾಗಿ ದಿನಾಂಕ-08.12.2021 ಸಂಜೆ 06.00 ಗಂಟೆ ಸಮಯದಲ್ಲಿ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ಹುಸ್ಕೂರು ಗ್ರಾಮದಲ್ಲಿ ಚಾಸಾ-1- ಶ್ರೀಮತಿ.ಜವರಮ್ಮರವರ ಮನೆಯ ಗಲ್ಲಿಯಲ್ಲಿ ಅವರ ಮನೆ ಗೋಡೆ ಬಿದ್ದು ಹೋಗಿದ್ದು, ಸದರಿ ಗೋಡೆಯನ್ನು ಚಾಸಾ-1 ಮತ್ತು 2 ರವರು ಕಟ್ಟುತ್ತಿದ್ದಾಗ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ಮತ್ತು 2 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 1ನೇ ಆರೋಪಿಯಾದ ನೀವು ಸದರಿ ಗಲ್ಲಿಗೆ ದಿಂಡು ಕಲ್ಲುಗಳನ್ನು ಹಾಕುತ್ತಿದ್ದಾಗ ಚಾಸಾ-1 ರವರ ಬಾಬ್ತು ಹೊಸ ಗೋಡೆ ಅಲುಗಾಡುತ್ತಿದ್ದು, ಈ ಬಗ್ಗೆ ಚಾಸಾ-1 ರವರು 1ನೇ ಆರೋಪಿಯಾದ ನಿಮ್ಮನ್ನು

ಉದ್ದೇಶಿಸಿ "ಏಕೆ ಹೀಗೆ ಮಾಡುತ್ತಿದ್ದೀಯಾ ಸಾಲ ಈಸಿಕೊಂಡು ಗೋಡೆ ಕಟ್ಟುತ್ತಿದ್ದೇವೆ" ಎಂದು ಹೇಳಿದಾಗ, 1 ಮತ್ತು 2ನೇ ಆರೋಪಿಗಳಾದ ನೀವು ಚಾಸಾ-1 ರವರ ಮಾನಕ್ಕೆ ಕುಂದುಂಟು ಮಾಡುವ ಉದ್ದೇಶದಿಂದ ಚಾಸಾ-1 ರವರನ್ನು ಉದ್ದೇಶಿಸಿ "ಸೂಳೆಮುಂಡೆ, ಲೋಫರ್ ಮುಂಡೆ" ಎಂದು ಬೈದಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 509 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಎರಡನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 1ನೇ ಆರೋಪಿಯಾದ ನೀವು ಸ್ಥಳದಲ್ಲಿಯೇ ಬಿದ್ದಿದ್ದ ಮಾರಕಾಯುಧವಾದ ದೊಣ್ಣೆಯನ್ನು ತೆಗೆದುಕೊಂಡು ಚಾಸಾ-1 ರವರ ಬೆನ್ನಿಗೆ ಮತ್ತು ಹೊಟ್ಟೆಗೆ ಸ್ವ-ಇಚ್ಛೆಯಿಂದ ಹಲ್ಲೆ ಮಾಡಿ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 324 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು, ಆರೋಪಿಗಳಾದ ನೀವು ಚಾಸಾ-1 ಮತ್ತು 2 ರವರನ್ನು ಉದ್ದೇಶಿಸಿ "ಬೋಳಿಮಗನೆ, ಸೂಳೆಮಗನೆ" ಎಂದು ಅವಾಚ್ಯ ಶಬ್ಧಗಳಿಂದ ಬೈದಿದ್ದು, ಆ ಮೂಲಕ ಚಾಸಾ-1 ರವರಿಗೆ ಉದ್ರೇಕವನ್ನುಂಟು ಮಾಡಿದರೆ ಅಂತಹ ಉದ್ರೇಕದಿಂದ ಅವರು ಕುಪಿತರಾಗಿ ಶಾಂತಿಭಂಗವನ್ನುಂಟು ಮಾಡಲೆಂಬ ಅಥವಾ ಯಾವುದೇ ಅಪರಾಧವನ್ನು ಮಾಡಬೇಕೆಂಬ ಉದ್ದೇಶದಿಂದ ಅವರನ್ನು ಅವಮಾನಪಡಿಸಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಪ್ರಶ್ನೆಃ1- ಈ ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ದೋಷಾರೋಪಣೆಯನ್ನು ಅರ್ಥಮಾಡಿಕೊಂಡಿರುವಿರಾ?

1 ಮತ್ತು 2ನೇ ಆರೋಪಿಗಳ ಉತ್ತರಃ

ಪ್ರಶ್ನೆಃ2- ಸದರಿ ಆರೋಪಣೆಗಳನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೋ?

1 ಮತ್ತು 2ನೇ ಆರೋಪಿಗಳ ಉತ್ತರಃ

(ಆರೋಪಿಗಳಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ದೋಷಾರೋಪಣೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ ಆರೋಪಿಗಳು ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತ್ತೆಂದು ದೃಢೀಕರಿಸಿರುತ್ತೇನೆ.)

ದಿನಾಂಕಃ 18.02.2026

(ಸತೀಶ. ಕೆ.ಜಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ನಂಜನಗೂಡು.